**Publication - VijayaVani**

Date 01/12/2013
Page No 05

# ಜಿಲ್ಲಾ ಕೇಂದ್ರಗಳಲ್ಲಿ ಮಾನಸಿಕ ಪುನರ್ವಸತಿ ಕೇಂದ್ರ: ಖಾದರ್

**ಬೆಂಗಳೂರು:** ರಾಜ್ಯದ ಪ್ರತಿ ಜಿಲ್ಲಾ ಕೇಂದ್ರಗಳಲ್ಲಿ ಮಾನಸಿಕ ಪುನರ್ವಸತಿ ಕೇಂದ್ರಗಳನ್ನು ತೆರೆಯಲು ಉದ್ದೇಶಿಸಲಾಗಿದ್ದು, ಖಾಸಗಿ ಸಾರ್ವಜನಿಕ ಸಹಭಾಗಿತ್ವ(ಪಿಪಿಪಿ)ಕ್ಕೂ ಅವಕಾಶ ಮಾಡಿಕೊಡಲಾಗುವುದು ಎಂದು ಆರೋಗ್ಯ ಹಾಗೂ ಕುಟುಂಬ ಕಲ್ಯಾಣ ಸಚಿವ ಯು.ಟಿ. ಖಾದರ್ ಹೇಳಿದರು.

ಕಡಬಮ್ಸ್ ಸಂಸ್ಥೆ ಕಗ್ಗಲಿಪುರದ ಗುಲಕಮಲೆ ಗ್ರಾಮದಲ್ಲಿ ನೂತನವಾಗಿ ಆರಂಭಿಸಿರುವ ಮಾದಕ ವ್ಯಸನದಿಂದ ಮುಕ್ತಗೊಳಿಸುವ ಪುನರ್ವಸತಿ ಕೇಂದ್ರವಾದ 'ಅನುನಿತಾ' ಕಟ್ಟಡ ಉದ್ಘಾಟನಾ ಕಾರ್ಯಕ್ರಮದಲ್ಲಿ ಶನಿವಾರ ಮಾತನಾಡಿದರು.

ಖಾಸಗಿ ಸಾರ್ವಜನಿಕ ಸಹಭಾಗಿತ್ವದಲ್ಲಿ ಪ್ರತಿ ಜಿಲ್ಲೆಯಲ್ಲಿ ಮಾನಸಿಕ ಪುನರ್ವಸತಿ ಕೇಂದ್ರಗಳನ್ನು ನಿರ್ಮಿಸಲಾಗುವುದು. ಇದಕ್ಕಾಗಿ ಪ್ರತಿ ಕೇಂದ್ರಕ್ಕೆ 18 ಲಕ್ಷ ರೂ. ಗಳನ್ನು ಪ್ರತಿ ವರ್ಷ ನೀಡಲಾಗುವುದು. ಜಿಲ್ಲಾ ಆರೋಗ್ಯ ಕೇಂದ್ರಗಳಲ್ಲಿ ಸ್ಥಳಾವಕಾಶವಿಲ್ಲದಿದ್ದಲ್ಲಿ ಖಾಸಗಿ ಕಟ್ಟಡಗಳಲ್ಲಿ ಪುನರ್ವಸತಿ ಕೇಂದ್ರಗಳನ್ನು ತೆರೆಯಲು 20 ಸಾವಿರ ರೂ. ಬಾಡಿಗೆ ನೀಡಲಾಗುವುದು ಎಂದರು.

ರಾಜ್ಯಪಾಲ ಹಂಸರಾಜ್ ಭಾರದ್ವಾಜ್, ತಮಿಳುನಾಡು ರಾಜ್ಯಪಾಲ ರೋಸಯ್ಯ, ನಿಮ್ಹಾನ್ಸ್‌ನ ಕುಲಪತಿ ಹಾಗೂ ನಿರ್ದೇಶಕ ಡಾ. ಪಿ. ಸತೀಶ್ ಚಂದ್ರ , ಕಡಬಂ ಎಂ. ರಮೇಶ್, ಸಂದೇಶ್ ಆರ್. ಕಡಬಂ ಮತ್ತಿತರರು ಉಪಸ್ಥಿತರಿದ್ದರು. ಡಾ. ಸ್ವಾಮಿನಾಥನ್ ಹಾಗೂ ಡಾ. ಲತಾ ಹೇಮಚಂದ್ರ ಅವರನ್ನು ಇದೇ ಸಂದರ್ಭದಲ್ಲಿ ಸನ್ಮಾನಿಸಲಾಯಿತು.



ಕಡಬಮ್ಸ್ ಸಂಸ್ಥೆ ಗುಲಕಮಲೆಯಲ್ಲಿ ಆರಂಭಿಸಿರುವ 'ಅನುನಿತಾ' ಕಟ್ಟಡವನ್ನು ರಾಜ್ಯಪಾಲ ಹಂಸರಾಜ್ ಭಾರದ್ವಾಜ್ ಮತ್ತು ತಮಿಳುನಾಡು ರಾಜ್ಯಪಾಲ ರೋಸಯ್ಯ ಉದ್ಘಾಟಿಸಿದರು. ಸಚಿವ ಖಾದರ್ ಇದ್ದರು.